ದಿನಾಂಕಃ 04.11.2025 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು : 2ನೇ ಎದುರುದಾರರ ಪರ ವಕೀಲರಿಂದ :**

ನನಗೆ ಕೆಲಸ ಮಾಡಲು ಆಗುತ್ತಿಲ್ಲ. ನಾನು ಮುಂಚೆ ಕೆಲಸ ಮಾಡುತ್ತಿದ್ದ ಕಂಪನಿಯ ಸಂಬಳದ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ. ಅಪಘಾತ ಸ್ಥಳವು ಕೆ.ಆರ್.ಎಸ್-ಮೈಸೂರು ಮುಖ್ಯ ರಸ್ತೆಯಾಗಿರುತ್ತದೆ. 2 ಭಾರಿ ವಾಹನಗಳು ಏಕಕಾಲದಲ್ಲಿ ಸಂಚರಿಸಬಹುದು ಎಂದರೆ ಸರಿ. ರಸ್ತೆಯ ಎಡಭಾಗದಲ್ಲಿ ನನ್ನ ವಾಹನ ಚಾಲನೆ ಮಾಡಲು ನನಗೆ ತೊಂದರೆ ಇಲ್ಲ. ನಾನು ಆ ದಿನ ಫೋನಿನಲ್ಲಿ ಮಾತನಾಡಿಕೊಂಡು ಹೆಲ್ಮೆಟ್ ಹಾಕದೇ ರಸ್ತೆಯ ಬಲಭಾಗದಲ್ಲಿ ನನ್ನ ವಾಹನ ಚಾಲನೆ ಮಾಡಿದ ಕಾರಣ ಅಪಘಾತವಾಗಿರುತ್ತದೆ ಎಂದರೆ ಸುಳ್ಳು. ನನ್ನ ನಿರ್ಲಕ್ಷ್ಯತನದಿಂದ ಅಪಘಾತವಾಗಿರುತ್ತದೆ ಎಂದರೆ ಸುಳ್ಳು. ಅಪಘಾತವಾದ ನಂತರದಲ್ಲಿ ನಾನು ಮುಂಚೆ ಹೋಗುತ್ತಿದ್ದ ಕೆಲಸವನ್ನು ಬಿಟ್ಟಿರುತ್ತೇನೆ, ಆ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ. ನಾನು ಈಗಲೂ ಸಹ ಸದರಿ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಕಾರಣ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ.

**2.** ಅಪಘಾತವಾದ ನಂತರ ಮೊದಲು ಸಂತೋಷ್ ಚಿಕಿತ್ಸಾಲಯದಲ್ಲಿ ಪ್ರಥಮ ಚಿಕಿತ್ಸೆ ಪಡೆದ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಕೊಟ್ಟಿಲ್ಲ. ಅದೇ ದಿನ ಬೃಂದಾವನ ಆಸ್ಪತ್ರೆಗೆ ದಾಖಲಾಗಿರುತ್ತೇನೆ. ನನಗೆ ಬೆರಳು ಮತ್ತು ಮಣಿಕಟ್ಟಿನಲ್ಲಿ ಮೂಳೆ ಮುರಿದಿರುತ್ತದೆ. 2 ಜಾಗದಲ್ಲಿ ಶಸ್ತ್ರ ಚಿಕಿತ್ಸೆ ಮಾಡಿರುತ್ತಾರೆ. ನನಗೆ ಈಗಲೂ ಸಹ ಬರೆಯಲು, ಊಟ ಮಾಡಲು, ಸ್ನಾನ ಮಾಡಲು ತೊಂದರೆಯಾಗುತ್ತದೆ. ನನಗೆ ತೀವ್ರ ಸ್ವರೂಪದ ಗಾಯಗಳು ಆಗಿಲ್ಲ ಎಂದರೆ ಸರಿಯಲ್ಲ. ಆ ಕಾರಣದಿಂದ ಶಸ್ತ್ರಚಿಕಿತ್ಸೆಗೆ ಸಂಬಂಧಿಸಿದಂತೆ ಬಿಲ್ಲುಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಕಳೆದ ವಾರ ವೈದ್ಯರನ್ನು ಭೇಟಿಯಾಗಿರುತ್ತೇನೆ. ಹೊರರೋಗಿಯಾಗಿ ಪ್ರತಿ ತಿಂಗಳು ವೈದ್ಯರ ಬಳಿ ಹೋಗಿರುತ್ತೇನೆ, ಆ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಕೊಟ್ಟಿಲ್ಲ.

**3.** ನಾನು ಮಾಸಿಕವಾಗಿ ರೂ.30,000/- ಸಂಪಾದನೆ ಮಾಡುತ್ತಿದ್ದ ಬಗ್ಗೆ ಯಾವುದೇ ದಾಖಲೆ ಕೊಟ್ಟಿಲ್ಲ. ನನಗೆ ನಾನು ಹೇಳಿದಷ್ಟು ಆದಾಯ ಇಲ್ಲ ಎಂದರೆ ಸರಿಯಲ್ಲ. ನಾನು ಚಿಕಿತ್ಸೆಗಾಗಿ ಒಳರೋಗಿಯಾಗಿ 5 ದಿನ ಆಸ್ಪತ್ರೆಗೆ ದಾಖಲಾಗಿಲ್ಲ ಹಾಗೂ 2.5 ಲಕ್ಷ ರೂ.ಗಳನ್ನು ಚಿಕಿತ್ಸೆಗಾಗಿ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಭವಿಷ್ಯದ ಚಿಕಿತ್ಸೆಗಾಗಿ 2 ಲಕ್ಷ ರೂ. ಅವಶ್ಯಕತೆ ಇಲ್ಲ ಎಂದರೆ ಸುಳ್ಳು. ನನ್ನ ಬೈಕ್ ಜಖಂ ಆಗಿ ರೂ.85,000/- ನಷ್ಟ ಆದ ಬಗ್ಗೆ ನ್ಯಾಯಾಲಯಕ್ಕೆ ದಾಖಲೆ ಕೊಟ್ಟಿಲ್ಲ ಎಂದರೆ ಸರಿ. ಅಪಘಾತಕ್ಕೂ ಮುಂಚೆ ನಾನು ಚೆನ್ನಾಗಿದ್ದು, ಈಗಲೂ ಸಹ ಚೆನ್ನಾಗಿರುತ್ತೇನೆ ಎಂದರೆ ಸುಳ್ಳು. ಅಪಘಾತ ನನ್ನ ತಪ್ಪಿನಿಂದ ಆಗಿದ್ದು ವಿಮೆ ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯಲು ದಾಖಲೆಗಳನ್ನು ಸೃಷ್ಟಿಸಿಕೊಂಡು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರಕರಣಕ್ಕೆ ಅನುಕೂಲವಾಗುವಂತೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಎಂ.ಎ.ಸಿ.ಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**